KARNATAKA NURSING & PARAMEDICAL SCIENCES EDUCATION (REGULATION) AUTHORITY
**Para Medical Board**
# 40/20A, Lakshmi Complex, First Floor, Opp. Vani Vilas Hospital, Fort, Bengaluru-560002
**Ph No:** 080-26702159, 26705773 **Email:** pmboffice97@gmail.com / pmbexamination@gmail.com

**PMB/204/19-20** **Date:18.07.2019**

## 2019-20ನೇ ಶೈಕ್ಷಣಿಕ ಸಾಲಿನ ಪ್ರವೇಶಾತಿ ಪ್ರಕಟಣೆ

2019-20ನೇ ಶೈಕ್ಷಣಿಕ ಸಾಲಿನ ಈ ಕೆಳಕಂಡ ಅರೆವೈದ್ಯಕೀಯ ಕೋರ್ಸ್‌ಗಳಿಗೆ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯ, ಜಿಲ್ಲಾ ಆಸ್ಪತ್ರೆ ಹಾಗೂ ರಾಜ್ಯದಲ್ಲಿನ ವಿವಿಧ ಖಾಸಗಿ ಪ್ಯಾರಾ ಮೆಡಿಕಲ್ ಸಂಸ್ಥೆಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| ಕ್ರ.ಸಂ | ಕೋರ್ಸ್‌ನ ಹೆಸರು |
|---|---|
| 01 | ಡಿಪ್ಲೋಮಾ ಇನ್ ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ |
| 02 | ಡಿಪ್ಲೋಮಾ ಇನ್ ಮೆಡಿಕಲ್ ಇಮೇಜಿಂಗ್ ಟೆಕ್ನಾಲಜಿ |
| 03 | ಡಿಪ್ಲೋಮಾ ಇನ್ ಹೆಲ್ತ್ ಇನ್ಸ್‌ಪೆಕ್ಟರ್ |
| 04 | ಡಿಪ್ಲೋಮಾ ಇನ್ ಮೆಡಿಕಲ್ ರೆಕಾರ್ಡ್ಸ್ ಟೆಕ್ನಾಲಜಿ |
| 05 | ಡಿಪ್ಲೋಮಾ ಇನ್ ಡಯಾಲಿಸಿಸ್ ಟೆಕ್ನಾಲಜಿ |
| 06 | ಡಿಪ್ಲೋಮಾ ಇನ್ ಆಪರೇಷನ್ ಥಿಯೇಟರ್ ಮತ್ತು ಅನಸ್ಥೇಶಿಯಾ ಟೆಕ್ನಾಲಜಿ |
| 07 | ಡಿಪ್ಲೋಮಾ ಇನ್ ಆಪ್ಟಾಲ್ಮಿಕ್ ಟೆಕ್ನಾಲಜಿ |
| 08 | ಡಿಪ್ಲೋಮಾ ಇನ್ ಡೆಂಟಲ್ ಮೆಕ್ಯಾನಿಕ್ |
| 09 | ಡಿಪ್ಲೋಮಾ ಇನ್ ಡೆಂಟಲ್ ಹೈಜೀನ್ |

**ಕನಿಷ್ಠ ವಿದ್ಯಾರ್ಹತೆ:** (1) ಡಿಪ್ಲೋಮಾ ಇನ್ ಮೆಡಿಕಲ್ ರೆಕಾರ್ಡ್ಸ್ ಟೆಕ್ನಾಲಜಿ ಕೋರ್ಸ್‌ನ್ನು ಹೊರತುಪಡಿಸಿ ಉಳಿದ ಎಲ್ಲಾ ಕೋರ್ಸ್‌ಗಳಿಗೆ ಪಿ.ಯು.ಸಿ. (ವಿಜ್ಞಾನ)/ ತತ್ಸಮಾನ ಪರೀಕ್ಷೆ (ಭೌತಶಾಸ್ತ್ರ, ರಸಾಯನಶಾಸ್ತ್ರ, ಜೀವಶಾಸ್ತ್ರ) ವಿಷಯಗಳನ್ನು ತೆಗೆದುಕೊಂಡು ತೇರ್ಗಡೆ ಹೊಂದಿರಬೇಕು. (2) ಎಸ್.ಎಸ್.ಎಲ್.ಸಿ./ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಮೇಲೆ ತಿಳಿಸಿರುವ 9 ಕೋರ್ಸ್‌ಗಳಿಗೂ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. (3) ಡಿಪ್ಲೋಮಾ ಇನ್ ಮೆಡಿಕಲ್ ರೆಕಾರ್ಡ್ಸ್ ಟೆಕ್ನಾಲಜಿ ಕೋರ್ಸ್‌ಗೆ ಪಿ.ಯು.ಸಿ. (ಸೈನ್ಸ್, ಕಾಮರ್ಸ್, ಆರ್ಟ್ಸ್) ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿದವರು ಅಥವಾ ಎಸ್.ಎಸ್.ಎಲ್.ಸಿ ತೇರ್ಗಡೆ. (4) ಅರ್ಜಿದಾರರು 1 ರಿಂದ 10ನೇ ತರಗತಿ ಅಥವಾ ಪಿಯುಸಿ ಯವರೆಗೆ ಕನಿಷ್ಠ 07 ವರ್ಷಗಳು ಕರ್ನಾಟಕದಲ್ಲಿ ವಿದ್ಯಾಭ್ಯಾಸ ಮಾಡಿರಬೇಕು. ಇದಕ್ಕೆ ಸಂಬಂಧಿಸಿದ ದೃಢೀಕರಣ ಪ್ರತಿಯನ್ನು ಅರ್ಜಿಯೊಂದಿಗೆ ಸಲ್ಲಿಸುವುದು, ಅರ್ಜಿಯೊಂದಿಗೆ ಲಗತ್ತಿಸಿರುವ ವ್ಯಾಸಂಗ ಪ್ರಮಾಣ ಪತ್ರ ಮತ್ತು ಇತರೆ ದಾಖಲೆಗಳ ಮೂಲ ಪ್ರತಿಗಳನ್ನು ಕಡ್ಡಾಯವಾಗಿ ಕೌನ್ಸಿಲಿಂಗ್‌ಗೆ ಹಾಜರಾಗುವ ಸಮಯದಲ್ಲಿ ಸಲ್ಲಿಸುವುದು; ತಪ್ಪಿದಲ್ಲಿ ಕೌನ್ಸಿಲಿಂಗ್‌ಗೆ ಅವಕಾಶ ನೀಡಲಾಗುವುದಿಲ್ಲ.

to circulate on BMCRI website 22/7

**ಕೋರ್ಸಿನ ಅವಧಿ:** ಪಿ.ಯು.ಸಿ ಅಭ್ಯರ್ಥಿಗಳಿಗೆ 2 ವರ್ಷಗಳು + 3 ತಿಂಗಳು ಇಂಟರ್ನ್‌ಶಿಪ್ ಮತ್ತು ಎಸ್.ಎಸ್.ಎಲ್.ಸಿ. ಅಭ್ಯರ್ಥಿಗಳಿಗೆ 3 ವರ್ಷಗಳು + 3 ತಿಂಗಳು ಇಂಟರ್ನ್‌ಶಿಪ್.

**ವಯೋಮಿತಿ:** ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ಗರಿಷ್ಠ 35 ವರ್ಷಗಳು, ಪ.ಜಾ/ಪ.ಪಂ. ಹಾಗೂ ಸೇವಾನಿರತ ಅಭ್ಯರ್ಥಿಗಳಿಗೆ 40 ವರ್ಷಗಳು ಮೀರಿರಬಾರದು.

**ಅರ್ಜಿ ನಮೂನೆಗಳು:** ಮಂಡಳಿಯ ಜಾಲತಾಣ http://www.pmbkarnataka.org/ದಲ್ಲಿ ಲಭ್ಯವಿದ್ದು ಎಲ್ಲಾ ವಿದ್ಯಾರ್ಥಿಗಳು ಆನ್-ಲೈನ್ ಮೂಲಕ ಅರ್ಜಿಯನ್ನು ತುಂಬಬೇಕಾಗಿರುತ್ತದೆ.

**ಅರ್ಜಿಶುಲ್ಕ:** ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ರೂ.400/-, ಪರಿಶಿಷ್ಠ ಜಾತಿ/ ಪಂಗಡ/ ಪ್ರವರ್ಗ-1 ರ ಅಭ್ಯರ್ಥಿಗಳಿಗೆ ರೂ.250/- ಅರ್ಜಿ ಶುಲ್ಕವನ್ನು ಕಡ್ಡಾಯವಾಗಿ ಆನ್‌ಲೈನ್ ಮುಖಾಂತರವೇ ಡೆಬಿಟ್ / ಕ್ರೆಡಿಟ್ ಕಾರ್ಡ್ / ನೆಟ್ ಬ್ಯಾಂಕಿಂಗ್ ಮೂಲಕ ಮಾತ್ರ ಪಾವತಿಸುವುದು.

**ಅರ್ಜಿ ಸಲ್ಲಿಸುವ ದಿನಾಂಕ:** ದಿನಾಂಕ: 20.07.2019 ರಿಂದ ದಿನಾಂಕ 31.07.2019 ರವರೆಗೆ ಅರ್ಜಿಯು ಮಂಡಳಿಯ ಜಾಲತಾಣದಲ್ಲಿ ಲಭ್ಯವಿರುತ್ತದೆ. ಆನಂತರ ಯಾವುದೇ ಕಾರಣಕ್ಕೂ ಆಫ್-ಲೈನ್ ಮೂಲಕ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಅಭ್ಯರ್ಥಿಗಳ ಆಯ್ಕೆ:** ಅಭ್ಯರ್ಥಿಗಳನ್ನು ಅವರು ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಅಂಕಗಳ ಮತ್ತು ಪ್ರವರ್ಗಗಳ ಆಧಾರದ ಮೇರೆಗೆ ಆಯ್ಕೆ ಮಾಡಲಾಗುವುದು, ಕೌನ್ಸಿಲಿಂಗ್ ನಡೆಯುವ ದಿನಾಂಕವನ್ನು ಅಭ್ಯರ್ಥಿಗಳಿಗೆ ಅರ್ಜಿಯಲ್ಲಿ ನಮೂದಿಸಿದ ಮೊಬೈಲ್ ಸಂಖ್ಯೆಗೆ ಸೂಚನಾ ಸಂದೇಶವನ್ನು ಕಳುಹಿಸಲಾಗುವುದು.

**ವಿಶೇಷಾಧಿಕಾರಿಗಳು**